**Bangalore**
**Regional News**
**19.08.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು**

1. ಪರಿಶಿಷ್ಟ ಜಾತಿಗಳಿಗೆ ಒಳಮೀಸಲಾತಿ ವಿಚಾರ: ಮುಖ್ಯಮಂತ್ರಿ ನೇತೃತ್ವದಲ್ಲಿಂದು ವಿಶೇಷ ಸಂಪುಟ ಸಭೆ
2. ವಿಧಾನಸಭೆಯಲ್ಲಿ ಬೆಂಗಳೂರು ನಗರ ವಿಶ್ವವಿದ್ಯಾನಿಲಯಕ್ಕೆ ಡಾ. ಮನಮೋಹನ್ ಸಿಂಗ್ ಹೆಸರು ಘೋಷಣೆ
3. ಸಭಾಪತಿ ಬಸವರಾಜ ಹೊರಟ್ಟಿ ಅವರ ೪೫ ವರ್ಷಗಳ ಸುದೀರ್ಘ ಸೇವೆಗೆ ಮೇಲ್ಮನೆಯಲ್ಲಿ ಪಕ್ಷಾತೀತ ಶ್ಲಾಘನೆ
4. ರಕ್ಷಣಾ ಉತ್ಪಾದನೆ ಕುರಿತಂತೆ ಇಂದು ಬಿಇಎಲ್ ಜೊತೆ ಮಹತ್ವದ ಒಪ್ಪಂದಕ್ಕೆ ಸಹಿ ಹಾಕಿದ ಸಿಇಟಿಯುಎಂ
5. ಬೆಂಗಳೂರು ನಗರದಲ್ಲಿ ರಸ್ತೆ ಗುಂಡಿ ಮುಚ್ಚುವಂತೆ ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸೂಚನೆ

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿಂದು ಸಂಜೆ ೭.೩೦ಕ್ಕೆ ವಿಶೇಷ ಸಂಪುಟ ಸಭೆ ನಡೆಯಲಿದೆ. ಸಭೆಯಲ್ಲಿ ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ ನೀಡುವ ಬಗ್ಗೆ ನ್ಯಾಯಮೂರ್ತಿ ನಾಗಮೋಹನ್ ದಾಸ್ ಏಕಸದಸ್ಯ ಆಯೋಗ ಸಲ್ಲಿಸಿರುವ ವರದಿ ಕುರಿತಂತೆ ಚರ್ಚೆ ನಡೆಯಲಿದೆ. ಪರಿಶಿಷ್ಟರ ಎಡಗೈ ಹಾಗೂ ಬಲಗೈ ಸಮುದಾಯದ ಸಚಿವರಲ್ಲಿ ವರದಿ ಬಗ್ಗೆ ಒಮ್ಮತ ಮೂಡದಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಚಿವರ ಅಭಿಪ್ರಾಯ ಪಡೆಯಲಿದ್ದಾರೆ. ಸಂಪುಟ ಸಭೆಯ ಬಳಿಕ ಸರ್ಕಾರ ಅಂತಿಮ ನಿರ್ಧಾರಕ್ಕೆ ಬರಲಿದೆ.

<><><><>

ವಿಧಾನಸಭೆಯಲ್ಲಿಂದು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ೨೦೨೫ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ತಿದ್ದುಪಡಿ ವಿಧೇಯಕ ಮಂಡಿಸಿದರು. ಬಳಿಕ ಮಾತನಾಡಿದ ಅವರು, ಬೆಂಗಳೂರು ನಗರ ವಿಶ್ವವಿದ್ಯಾನಿಲಯಕ್ಕೆ ಮಾಜಿ ಪ್ರಧಾನಿ, ಆರ್ಥಿಕ ತಜ್ಞ ದಿವಂಗತ ಡಾ. ಮನಮೋಹನ್ ಸಿಂಗ್ ಅವರ ಹೆಸರನ್ನು ನಾಮಕರಣ ಮಾಡಿ ಬಜೆಟ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಈಗಾಗಲೇ ಘೋಷಿಸಿದ್ದಾರೆ. ಸದಸ್ಯರು ಈ ವಿಧೇಯಕಕ್ಕೆ ಬೆಂಬಲ

ಸೂಚಿಸಬೇಕೆಂದು ಕೋರಿದರು. ಪ್ರತಿಪಕ್ಷ ನಾಯಕ ಆರ್. ಅಶೋಕ ಮಾತನಾಡಿ, ಹೊಸ ವಿಶ್ವವಿದ್ಯಾಲಯ ಸ್ಥಾಪಿಸಿ, ಅದಕ್ಕೆ ಮನಮೋಹನ್ ಸಿಂಗ್ ಹೆಸರಿಡಿ ಎಂದು ಸಲಹೆ ನೀಡಿದರು. ಬಳಿಕ ಸಭಾಧ್ಯಕ್ಷ ಯು.ಟಿ. ಖಾದರ್ ಧ್ವನಿ ಮತದ ಮೂಲಕ ವಿಧೇಯಕ ಅಂಗೀಕರಿಸಲಾಗಿದೆ ಎಂದು ಪ್ರಕಟಿಸಿದರು. ಇದಕ್ಕೂ ಮೊದಲು ಪೌರಾಡಳಿತ ಸಚಿವ ರಹೀಂಖಾನ್ ಮಂಡಿಸಿದ ೨೦೨೫ನೇ ಸಾಲಿನ ಕರ್ನಾಟಕ ಮುನ್ಸಿಪಾಲಿಟಿಗಳ ಮತ್ತು ಇತರ ಕಾನೂನು ತಿದ್ದುಪಡಿ ವಿಧೇಯಕವನ್ನು ಸಭಾಧ್ಯಕ್ಷರು ಅಂಗೀಕರಿಸಲಾಗಿದೆ ಎಂದು ಪ್ರಕಟಿಸಿದರು.

<><><>

ವಿಧಾನಪರಿಷತ್‌ನಲ್ಲಿಂದು ಸದಸ್ಯರಾಗಿ ಸುದೀರ್ಘ ೪೫ ವರ್ಷಗಳ ಕಾಲ ಸೇವೆ ಸಲ್ಲಿಸಿರುವ ಹಾಲಿ ಸಭಾಪತಿ ಬಸವರಾಜ ಹೊರಟ್ಟಿ ಅವರನ್ನು ಪಕ್ಷಭೇದ ಮರೆತು ಸದಸ್ಯರು ಹಾಡಿ ಹೊಗಳಿದರು. ಕಾಂಗ್ರೆಸ್ ಸದಸ್ಯ ಮಂಜುನಾಥ ಭಂಡಾರಿ ಮಂಡಿಸಿದ ಅಭಿನಂದನಾ ಪ್ರಸ್ತಾವನೆಗೆ ಬಿಜೆಪಿ, ಕಾಂಗ್ರೆಸ್, ಜೆಡಿಎಸ್ ಸದಸ್ಯರು ಹೊರಟ್ಟಿಯವರ ಸೇವೆಯನ್ನು ಮುಕ್ತಕಂಠದಿಂದ ಪ್ರಶಂಸಿಸಿದರು. ಕಾಂಗ್ರೆಸ್ ಹಿರಿಯ ನಾಯಕ ಬಿ.ಕೆ.ಹರಿಪ್ರಸಾದ್, ನೀವೂ ಸದನದಲ್ಲಿ ನಡೆದುಕೊಳ್ಳುವ ರೀತಿ ಸದಸ್ಯರಿಗೆ ತಿಳಿ ಹೇಳುವುದು ಎಲ್ಲವೂ ಮಾದರಿಯಾಗಿದೆ ಎಂದು ಹಾಡಿಹೊಗಳಿದರು. ಮಂಜುನಾಥ ಭಂಡಾರಿ ಮಾತನಾಡಿ, ಓರ್ವ ಜನಪ್ರತಿನಿಧಿ ಸತತ ೪೫ ವರ್ಷಗಳ ಕಾಲ ಸಾರ್ವಜನಿಕ ಜೀವನದಲ್ಲಿರುವುದು ಸಾಮಾನ್ಯ ಮಾತಲ್ಲ. ಮತದಾರರು ಒಂದು ಬಾರಿ ಆಯ್ಕೆ ಮಾಡಿದರೆ ಮತ್ತೊಂದು ಬಾರಿ ಆಯ್ಕೆ ಮಾಡುವುದೇ ಕಷ್ಟ. ಅಂತಹುದರಲ್ಲಿ ೪೫ ವರ್ಷ ಗೆದ್ದು ಬಂದಿದ್ದೀರಿ ಎಂದರೆ ಅದೊಂದು ದಾಖಲೆಯೇ ಸರಿ ಎಂದು ಹೇಳಿದರು. ೧೮ ಮಂದಿ ಮುಖ್ಯಮಂತ್ರಿಗಳು, ೪೩೨ ಸಚಿವರು, ೫ ಸಾವಿರಕ್ಕೂ ಹೆಚ್ಚು ಶಾಸಕರ ಜೊತೆ ನಿಮಗೆ ಒಡನಾಟವಿದೆ. ನನಗೆ ತಿಳಿದಿರುವ ಪ್ರಕಾರ, ಭಾರತದ ಇತಿಹಾಸದಲ್ಲೇ ಇದು ಸುದೀರ್ಘವಾದ ದಾಖಲೆ ಎಂದು ಬಣ್ಣಿಸಿದರು. ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ನಿಮ್ಮ ಪ್ರಾಮಾಣಿಕತೆ, ಸರಳತೆ, ಮತದಾರರು ಇಟ್ಟ ವಿಶ್ವಾಸವೇ ಈ ಸದನಕ್ಕೆ ಆಯ್ಕೆ ಮಾಡಲು ಕಾರಣ. ಯಾವುದೇ ಪಕ್ಷದಲ್ಲಿದ್ದರೂ ನೀವು ಪಕ್ಷಾತೀತವಾಗಿ ನಡೆದುಕೊಂಡಿದ್ದೀರಿ ಎಂದು ಹೇಳಿದರು.

<><><>

ದೇಶದ ರಕ್ಷಣೆಗೆ ನಿರ್ಣಾಯಕವಾದ ಹಾಗೂ ಸುಧಾರಿತ ತಂತ್ರಜ್ಞಾನವನ್ನು ಸ್ಥಳೀಯವಾಗಿ ಅಭಿವೃದ್ಧಿಪಡಿಸಲು ದೇಶದ ಪ್ರಮುಖ ಏರೋಸ್ಪೇಸ್ ಸಂಸ್ಥೆಯಾದ ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ - ಬಿಇಎಲ್ ಹಾಗೂ ಪರಿಹಾರಗಳ ಜಾಗತಿಕ ಪೂರೈಕೆದಾರ ಸೆಂಟಮ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ಇಂದು ಮಹತ್ವದ ಒಪ್ಪಂದಕ್ಕೆ ಸಹಿ ಹಾಕಿವೆ. ಬಿಇಎಲ್ ನಿರ್ದೇಶಕ ಸುರೇಶ್ ಕುಮಾರ್ ಕೆ.ವಿ. ಮತ್ತು ಸಿಇಟಿಯುಎಂನ ಅಪ್ಪಾರಾವ್ ವಿ. ಮಲವರಪು ಒಡಂಬಡಿಕೆಯ ದಾಖಲೆಗಳನ್ನು ವಿನಿಮಯ ಮಾಡಿಕೊಂಡಿದ್ದಾರೆ. ಈ ಕಾರ್ಯತಂತ್ರದ ಪಾಲುದಾರಿಕೆಯು ರಾಷ್ಟ್ರೀಯ ರಕ್ಷಣೆಗೆ ನಿರ್ಣಾಯಕವಾದ ಸುಧಾರಿತ ತಂತ್ರಜ್ಞಾನ ಡೊಮೈನ್‌ಗಳಲ್ಲಿ ಸ್ಥಳೀಯ ವಿನ್ಯಾಸ ಮತ್ತು ಉತ್ಪಾದನಾ ಸಾಮರ್ಥ್ಯಗಳನ್ನು ಬಲಪಡಿಸುವ ಗುರಿ ಹೊಂದಿದೆ.

<><><>

ಬೆಂಗಳೂರು ನಗರದಲ್ಲಿ ಸಮರೋಪಾದಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಲು ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ನಗರದಲ್ಲಿ ಪರಿಣಾಮಕಾರಿಯಾಗಿ ರಸ್ತೆ ಗುಂಡಿಗಳನ್ನು ಮುಚ್ಚುವ ಸಲುವಾಗಿ ಬಿಬಿಎಂಪಿ ಎಲ್ಲಾ ಇಂಜಿನಿಯರ್ ಗಳಿಗೆ ಆಯೋಜಿಸಿದ್ದ ತರಬೇತಿ ಕಾರ್ಯಗಾರ ಉದ್ದೇಶಿಸಿ ಮಾತನಾಡಿದ ಅವರು, ಮಳೆ ಬರುತ್ತಿರುವ ಹಿನ್ನೆಲೆಯಲ್ಲಿ ಪರಿಣಾಮಕಾರಿಯಾಗಿ ರಸ್ತೆ ಗುಂಡಿಗಳನ್ನು ಮುಚ್ಚಲು ಸಮಸ್ಯೆ ಆಗುತ್ತಿದೆ ಎಂದು ತಿಳಿಸಿದ್ದಾರೆ. ಮಳೆ ಬೀಳುವ ಸಮಯದಲ್ಲಿ ಕೋಲ್ಡ್ ಮಿಕ್ಸ್ ಹಾಗೂ ಇಕೋಫಿಕ್ಸ್ ಬಳಸಿಕೊಂಡು ರಸ್ತೆ ಗುಂಡಿಗಳನ್ನು ಮುಚ್ಚಲು ನಿರ್ದೇಶನ ನೀಡಿದ್ದಾರೆ.

<><><>

ಕೋಲಾರ ಜಿಲ್ಲೆಯ ವೇಮಗಲ್ ಕುರುಗಲ್ ಪಟ್ಟಣ ಪಂಚಾಯಿತಿಯ ೧೭ ಸ್ಥಾನಗಳಿಗೆ ಆಗಸ್ಟ್ ೧೭ ರಂದು ಮತದಾನ ನಡೆದಿದ್ದು, ನಾಳೆ ಮತ ಎಣಿಕೆ ನಡೆಯಲಿದೆ. ಚುನಾವಣಾ ಕಣದಲ್ಲಿದ್ದ ೫೧ ಜನ ಅಭ್ಯರ್ಥಿಗಳ ಚುನಾವಣಾ ಫಲಿತಾಂಶ ನಾಳೆ ಹೊರಬೀಳಲಿದೆ. ಕೋಲಾರದ ಜೂನಿಯರ್ ಕಾಲೇಜು ಆವರಣ ಸುತ್ತ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಲಾಗಿದೆ. ನಾಳೆ ಮತ ಎಣಿಕೆ ನಡೆಯುವುದರಿಂದ ನಾಳೆ ಬೆಳಿಗ್ಗೆ ೭ ರಿಂದ ಸಂಜೆ ೫ ಗಂಟೆಯವರೆಗೆ ಕೋಲಾರ ನಗರ ಮತ್ತು ಚುನಾವಣಾ ವ್ಯಾಪ್ತಿಯ ೫ ಕಿಲೋ ಮೀಟರ್ ವ್ಯಾಪ್ತಿಯಲ್ಲಿ ಎಲ್ಲಾ ರೀತಿಯ ಮದ್ಯದಂಗಡಿಗಳನ್ನು ಮುಚ್ಚಲು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಆದೇಶಿಸಿದ್ದಾರೆ.

<><><>

ರಾಜ್ಯದ ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಸೇರಿದಂತೆ ಚಿಕ್ಕಮಗಳೂರು, ಹಾಸನ, ದಾವಣಗೆರೆ ಜಿಲ್ಲೆಯ ಹಲವೆಡೆ ಧಾರಾಕಾರ ಮಳೆಯಾಗುತ್ತಿದೆ. ಮಹಾರಾಷ್ಟ್ರದ ಕೃಷ್ಣಾಕೊಳ್ಳದಲ್ಲಿ ಭಾರೀ ಮಳೆ ಆಗುತ್ತಿರುವುದರಿಂದ ಕೃಷ್ಣಾ ನದಿಯಿಂದ ಹಾಗೂ ಘಟಪ್ರಭಾ ನದಿಯಿಂದ ಅಪಾರ ಪ್ರಮಾಣದ ನೀರನ್ನು ಬಿಡಲಾಗುತ್ತದೆ, ಇದರಿಂದ ವಿಜಯಪುರ ಜಿಲ್ಲೆಯ ನಿಡಗುಂದಿ ತಾಲೂಕಿನ ಆಲಮಟ್ಟಿ ಅಣೆಕಟ್ಟಿನ ಒಳಹರಿವೂ ಹೆಚ್ಚಾಗಿದೆ. ಲಮಟ್ಟಿ ಅಣೆಕಟ್ಟೆಯ ಕೆಳಭಾಗದಲ್ಲಿರುವ ಜನರು ಎಚ್ಚರ ವಹಿಸಬೇಕೆಂದು ಅಧಿಕಾರಿಗಳು ಮನವಿ ಮಾಡಿದ್ದಾರೆ. ವಾಯುಭಾರ ಕುಸಿತದಿಂದಾಗಿ ಯಾದಗಿರಿ ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ಸುರಿಯುತ್ತಿರುವ ಮಳೆ ಇನ್ನೂ ೩-೪ ದಿನಗಳವರೆಗೆ ಸುರಿಯಲಿದೆ. ಈ ಕುರಿತು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್, ಶಾಲಾ ಕಾಲೇಜುಗಳಿಗೆ ಎರಡು ದಿನಗಳ ಕಾಲ ರಜೆ ಘೋಷಣೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ. ಧಾರವಾಡ ಜಿಲ್ಲೆಯಲ್ಲಿ ನಿರಂತರವಾಗಿ ಮಳೆ ಸುರಿಯುತ್ತಿದೆ. ಕಳೆದ ೨೪ ಗಂಟೆಯಲ್ಲಿ ಶೇಕಡ ೫೮೯ ರಷ್ಟು ಮಳೆಯಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಲಘಟಗಿ, ಧಾರವಾಡ, ನವಲಗುಂದ, ಅಣ್ಣಿಗೇರಿ ಮತ್ತು ಕುಂದಗೋಳ ತಾಲೂಕುಗಳಲ್ಲಿ ಜಾಸ್ತಿ ಪ್ರಮಾಣದಲ್ಲಿ ಮಳೆಯಾಗಿದೆ. ಬೆಳೆ ಹಾನಿ ಉಂಟಾದರೆ ಸರ್ಕಾರದ ನಿಯಮಾನುಸಾರ ಪರಿಹಾರ ಒದಗಿಸಲು ಕ್ರಮ ವಹಿಸಲಾಗುವುದು ಎಂದು ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

<><><>

ರಾಜ್ಯದ ಉತ್ತರ ಒಳನಾಡಿನಲ್ಲಿ ನೈಋತ್ಯ ಮುಂಗಾರು ತೀವ್ರಗೊಂಡಿದ್ದು, ದಕ್ಷಿಣ ಒಳನಾಡು ಹಾಗೂ ಕರಾವಳಿ ಕರ್ನಾಟಕದಲ್ಲಿ ಸಕ್ರಿಯವಾಗಿತ್ತು. ಉತ್ತರ ಕನ್ನಡ ಜಿಲ್ಲೆಯ ಕ್ಯಾಸಲ್‌ರಾಕ್‌ನಲ್ಲಿ ಅತಿ ಹೆಚ್ಚು ೨೨ ಸೆಂಟಿಮೀಟರ್ ಮಳೆಯಾಗಿದೆ. ಕರಾವಳಿ ಜಿಲ್ಲೆಗಳಾದ ಉತ್ತರಕನ್ನ‌ಡ, ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದೆ. ಬೆಳಗಾವಿ ಮತ್ತು ಧಾರವಾಡ ಜಿಲ್ಲೆಗಳಲ್ಲಿಯೂ ಧಾರಾಕಾರ ಮಳೆಯಾಗಲಿದೆ. ದಕ್ಷಿಣ ಒಳನಾಡು ಜಿಲ್ಲೆಗಳಾದ ಶಿವಮೊಗ್ಗ, ಚಿಕ್ಕಮಗಳೂರು, ಹಾಸನ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ಉಳಿದಂತೆ ಬೆಂಗಳೂರು ನಗರ, ಬಳ್ಳಾರಿ, ಕೊಡಗು ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗಲಿದೆ.

<><><>

ಕೇಂದ್ರ ಸರಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಪ್ರಧಾನಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ ಹಾಗೂ ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆಗಳ ನೋಂದಣಿಗೆ ನಾಳೆಯಿಂದ ಇದೇ ೨೫ರ ವರೆಗೆ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದೆ ಎಂದು ಬಾಗಲಕೋಟೆ ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿ ಶಶಿಧರ ಕುರೇರ ತಿಳಿಸಿದ್ದಾರೆ. ವಿವಿಧ ಬ್ಯಾಂಕ್ ಪ್ರತಿನಿಧಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಈ ಅಭಿಯಾನದಲ್ಲಿ ಪ್ರತಿಯೊಂದು ಬ್ಯಾಂಕ್ ಶಾಖೆಗಳಲ್ಲಿ ತಲಾ ೧೦೦ ಫಲಾನುಭವಿಗಳ ನೋಂದಣಿಗೆ ಗುರಿ ಹೊಂದಲಾಗಿದ್ದು, ನೋಂದಣಿಗೆ ಅಗತ್ಯ ಕ್ರಮಕೈಗೊಳ್ಳಲು ಸೂಚಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>